**ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.**
**ಸಿ.ಸಿ ನಂಃ 963/ 2019**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀ ಮಲ್ಲಪ್ಪ | ಫ್ರಾಸಾಃ **01** |
| ತಂದೆ ಹೆಸರುಃ | ವೀರಭದ್ರಪ್ಪ | ಚಾಸಾಃ **02** |
| ವಯಸ್ಸುಃ | **34** ವರ್ಷ | ದಿಃ **20-08-2025** |
| ಉದ್ಯೋಗಃ | ಕೂಲಿ ಕೆಲಸ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಕಾಳಬೆಳಗುಂದಿ ಗ್ರಾಮ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ನನಗೆ ಚಾಸಾಃ 3 ರವರ ಪರಿಚಯ ಇಲ್ಲ. ನನಗೆ ನ್ಯಾಯಾಲಯದ ಮುಂದೆ ಇರುವ ಆರೋಪಿತರ ಪರಿಚಯವೂ ಸಹ ಇಲ್ಲ ಹಾಗೂ ಅವರನ್ನು ನಾನು ಈ ಹಿಂದೆ ನೋಡಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಸಾಕ್ಷಿ ಪಂಚನಾಮೆಯಲ್ಲಿನ ತಮ್ಮ ಸಹಿಯನ್ನು ಈಗ ನೋಡಿ ಗುರುತಿಸಿದ್ದು, ಪಂಚನಾಮೆಯನ್ನು ನಿಪಿ-1 ಹಾಗೂ ಸಾಕ್ಷಿಯ ಸಹಿ ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರ ಪಂಚನಾಮೆಯಲ್ಲಿನ ಅಂಶಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಹಾಗೂ ಯಾವುದೇ ವಸ್ತು ಜಪ್ತಿ ಮಾಡಿಕೊಂಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ

ದಿನಾಂಕ 05.04.2019 ರಂದು ಪೋಲಿಸರು ನನ್ನನ್ನು ಮತ್ತು ಚಾಸಾಃ 3 ರವರನ್ನು ಪಂಚರನ್ನಾಗಿ ಕರೆದುಕೊಂಡು ನೀಲಹಳ್ಳಿ ಕ್ರಾಸ್ ಹತ್ತಿರ ರಸ್ತೆಗಾವಲು ಮಾಡುತ್ತಿರುವಾಗ ಆರೋಪಿತರು ಬೈಕಿನಲ್ಲಿ ಕಲಬೆರಕೆ ಸೇಂದಿ ಹಾಗೂ ಮದ್ಯವನ್ನು ಸಾಗಾಟ ಮಾಡುತ್ತಿರುವುದು ಕಂಡುಬಂದಿದ್ದು,ನನ್ನ ಸಮಕ್ಷಮ ಸದರಿ ಸೇಂದಿ ಮತ್ತು ಮದ್ಯವನ್ನು ಹಾಗೂ ಬೈಕನ್ನು ಜಪ್ತಿ ಮಾಡಿಕೊಂಡಿದ್ದರು ಎಂದರೆ ಸರಿಯಲ್ಲ. ಪೋಲಿಸರು ಸಾಃ 7.30 ರಿಂದ 08.30 ಗಂಟೆ ವರಗೆ ನನ್ನ ಸಮಕ್ಷಮ ಗುನ್ನೆಜಾಗದಲ್ಲಿ ನಿಪಿ-1 ರಂತೆ ಪಂಚಾನಮೆ ಮಾಡಿದ್ದರು ಎಂದರೆ ಸರಿಯಲ್ಲ. ಈ ಮೇಲಿನ ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿತರ ಪರಃ ವಕೀಲರವರಿಂದಃ

ಯಾವುದೇ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಃ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.